H8

# ಕರ್ನಾಟಕ ಸರ್ಕಾರ

ಸಂಖ್ಯೆ : ಸಿಆಸುಇ 555 ಸಅಸೇ 2013.

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ 22-7-2013.

## ಅಧಿಸೂಚನೆ

ಶ್ರೀ ಕೆ.ಎಲ್. ಲೋಕನಾಥ, ನಿವೃತ್ತ ಅಪರ ನಿರ್ದೇಶಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರನ್ನು ಭಾರತ ಸಂವಿಧಾನದ (118ನೇ ತಿದ್ದುಪಡಿ) ವಿಧೇಯಕ 2012, ಭಾರತ ಸಂವಿಧಾನದ (98ನೇ ತಿದ್ದುಪಡಿ) ಅಧಿನಿಯಮ 2012ರ ಮೇರೆಗೆ ಅನುಚ್ಛೇದ 371(ಜೆ) ರಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶಗಳಾದ ಗುಲ್ಬರ್ಗಾ, ರಾಯಚೂರು ಬೀದರ್, ಯಾದಗಿರಿ, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಿಗೆ ವಿಶೇಷ ಸ್ಥಾನಮಾನವನ್ನು ನೀಡಿದ್ದು, ಈ ತಿದ್ದುಪಡಿಯಿಂದಾಗಿ ಸ್ಥಳೀಯ ಜನರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಹಾಗೂ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಸಹಾಯವಾಗುತ್ತದೆ. ಈ ಸಂವಿಧಾನಿಕ ತಿದ್ದುಪಡಿಯನ್ನು ಪಾಲಿಸಲು ಹಾಗೂ ಇದರ ಚಟುವಟಿಕೆಗಳ ಮೇಲುಸ್ತುವಾರಿಗಾಗಿ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 527 ಸಅಸೇ 2013, ದಿನಾಂಕ : 9-7-2013ರಲ್ಲಿ ಸೃಜಿಸಲಾದ ಹೈದ್ರಾಬಾದ್ - ಕರ್ನಾಟಕ ವಿಶೇಷ ಕೋಶದ ಜಂಟಿ ಕಾರ್ಯದರ್ಶಿ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಿಸಲಾಗಿದೆ.

ಶ್ರೀ ಕೆ.ಎಲ್. ಲೋಕನಾಥ, ನಿವೃತ್ತ ಅಪರ ನಿರ್ದೇಶಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಗುತ್ತಿಗೆ ಆಧಾರದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Chandr

**(ಚಂದ್ರಶೇಖರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿ.ಆ.ಸು.ಇಲಾಖೆ (ಸೇವೆಗಳು-6)

BR 22/7/13

ಇವರಿಗೆ :

1) ಸಂಕಲನಾಧಿಕಾರಿ, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
2) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಮತ್ತು ಅಭಿವೃದ್ಧಿ ಆಯುಕ್ತರು.
6) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ ಸಿ.ಆ.ಸು. ಇಲಾಖೆ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಕಾರ್ಯದರ್ಶಿ ಕಾನೂನು, ನ್ಯಾಯ & ಮಾನವ ಹಕ್ಕುಗಳ ಇಲಾಖೆ, ಬೆಂಗಳೂರು.
9) ಶ್ರೀ ಕೆ.ಎಲ್. ಲೋಕನಾಥ, ನಂ. 202, 6ನೇ ಮುಖ್ಯರಸ್ತೆ, 10ನೇ 'ಎ' ಅಡ್ಡರಸ್ತೆ, ಯಲಹಂಕ ಉಪನಗರ, ಬೆಂಗಳೂರು-560 106.
10) ಸರ್ಕಾರದ ಅಪರ : ಜಂಟಿ : ಉಪ ಕಾರ್ಯದರ್ಶಿ, ಸಿ.ಆ.ಸು. ಇಲಾಖೆ / ಆಡಳಿತ / ಕಾರ್ಯಕಾರಿ / ಶಿಷ್ಟಾಚಾರ / ಸಚಿವ ಸಂಪುಟ / ಇ-ಆಡಳಿತ.
11) ಸರ್ಕಾರದ ಉಪಕಾರ್ಯದರ್ಶಿ (ಸೇವೆಗಳು), ಸಿ.ಆ.ಸು. ಇಲಾಖೆ ಇವರ ಆಪ್ತ ಸಹಾಯಕರು, ಬೆಂಗಳೂರು.
12) ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇ. (ಲೆಕ್ಕಪತ್ರ 1 & 2) / ಐ.ಆರ್.ಎಲ್.ಎ./ ಗ್ರಂಥಾಲಯ, ಬೆಂಗಳೂರು.
13) ಶಾಖಾ ರಕ್ಷಾ ಕಡತ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಭಾರತ ಸಂವಿಧಾನದ ಅನುಚ್ಛೇದ 371 (ಜೆ) 118ನೇ ತಿದ್ದುಪಡಿಯ ಚಟುವಟಿಕೆಗಳ ಮೇಲುಸ್ತುವಾರಿಗಾಗಿ **ಹೈದರಾಬಾದ್-ಕರ್ನಾಟಕ ವಿಶೇಷ ಕೋಶ** ಸೃಜಿಸುವ ಬಗ್ಗೆ.

ಪ್ರಸ್ತಾವನೆ:

2013-14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ, ಭಾರತ ಸಂವಿಧಾನದ ಅನುಚ್ಛೇದ 371 (ಜೆ) ಅಡಿಯಲ್ಲಿ 118ನೇ ತಿದ್ದುಪಡಿಯಂತೆ ಹೈದರಾಬಾದ್ ಕರ್ನಾಟಕ ಪ್ರದೇಶಗಳಾದ ಗುಲ್ಬರ್ಗಾ, ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಿಗೆ ವಿಶೇಷ ಸ್ಥಾನಮಾನ ನೀಡಿರುವುದರಿಂದ, ಆ ಪ್ರದೇಶಗಳ ಸ್ಥಳೀಯ ಜನರಿಗೆ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಸಹಾಯಕವಾಗಲು ಶಿಕ್ಷಣ ಮತ್ತು ಉದ್ಯೋಗಗಳಲ್ಲಿ ಮೀಸಲಾತಿ ಕಲ್ಪಿಸಲು ಪರಿಗಣಿಸಬೇಕಾಗಿದೆ. ಸದರಿ ಸಂವಿಧಾನಿಕ ತಿದ್ದುಪಡಿಯನ್ನು ಅನುಷ್ಠಾನಗೊಳಿಸಲು ಹಾಗೂ ಇದರ ಚಟುವಟಿಕೆಗಳ ಮೇಲುಸ್ತುವಾರಿಗಾಗಿ **ಹೈದರಾಬಾದ್-ಕರ್ನಾಟಕ ವಿಶೇಷ ಕೋಶವನ್ನು ಜಂಟಿ ಕಾರ್ಯದರ್ಶಿಗಳ ಮೇಲುಸ್ತುವಾರಿಯಲ್ಲಿ ಈ ಕೆಳಕಂಡ ಪೂರಕ ಹುದ್ದೆಗಳೊಂದಿಗೆ** ಸೃಜಿಸಲು ಸರ್ಕಾರವು ತೀರ್ಮಾನಿಸಿದೆ.

| ಕ್ರಮ ಸಂಖ್ಯೆ | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|
| 1 | ಜಂಟಿ ಕಾರ್ಯದರ್ಶಿ (ಎಕ್ಸ್‌ಕೇಡರ್) | 01 |
| 2 | ಆಪ್ತ ಸಹಾಯಕ (ಶೀಘ್ರಲಿಪಿಗಾರ) | 01 |
| 3 | ಕಿರಿಯ ಸಹಾಯಕ | 01 |
| 4 | ದಲಾಯತ್ | 01 |
| | **ಶಾಖೆಯ ಪೂರಕ ಹುದ್ದೆಗಳು** | |
| 5 | ಹಿರಿಯ ಸಹಾಯಕ | 01 |
| 6 | ಕಿರಿಯ ಸಹಾಯಕ | 01 |
| 7 | ಬೆರಳಚ್ಚುಗಾರ/ ಡಾಟಾ ಎಂಟ್ರಿ ಆಪರೇಟರ್ | 01 |
| 8 | ದಲಾಯತ್ | 01 |

ಮೇಲೆ ತಿಳಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 527 ಸಅಸೇ 2013**
**ಬೆಂಗಳೂರು, ದಿನಾಂಕ: 09ನೇ ಜುಲೈ 2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2013-14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ, ಭಾರತ ಸಂವಿಧಾನದ ಅನುಚ್ಛೇದ 371 (ಜೆ) ಅಡಿಯಲ್ಲಿ ಸಂವಿಧಾನದ 118ನೇ ತಿದ್ದುಪಡಿಯಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶಗಳಾದ ಗುಲ್ಬರ್ಗಾ, ಬೀದರ್, ಯಾದಗಿರಿ,

--2

ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಿಗೆ ವಿಶೇಷ ಸ್ಥಾನಮಾನ ನೀಡಿರುವುದರಿಂದ, ಆ ಪ್ರದೇಶಗಳ ಸ್ಥಳೀಯ ಜನರಿಗೆ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಸಹಾಯಕವಾಗಲು ಶಿಕ್ಷಣ ಮತ್ತು ಉದ್ಯೋಗಗಳಲ್ಲಿ ಮೀಸಲಾತಿ ಕಲ್ಪಿಸಲು, ಪರಿಗಣಿಸಲು ಹಾಗೂ ಸದರಿ ಸಂವಿಧಾನಿಕ ತಿದ್ದುಪಡಿಯನ್ನು ಅನುಷ್ಠಾನಗೊಳಿಸಲು ಹಾಗೂ ಇದರ ಚಟುವಟಿಕೆಗಳ ಮೇಲುಸ್ತುವಾರಿಗಾಗಿ **ಹೈದರಾಬಾದ್-ಕರ್ನಾಟಕ ವಿಶೇಷ ಕೋಶವನ್ನು** ಜಂಟಿ ಕಾರ್ಯದರ್ಶಿಗಳ ಮೇಲುಸ್ತುವಾರಿಯಲ್ಲಿ ಈ ಕೆಳಕಂಡ ಪೂರಕ ಸಿಬ್ಬಂದಿಗಳೊಂದಿಗೆ ಸೃಜಿಸಿದೆ.

| ಕ್ರಮ ಸಂಖ್ಯೆ | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|
| 1 | **ಜಂಟಿ ಕಾರ್ಯದರ್ಶಿ (ಎಕ್ಸ್‌ಕೇಡರ್)** | **01** |
| 2 | ಆಪ್ತ ಸಹಾಯಕ (ಶೀಘ್ರಲಿಪಿಗಾರ) | **01** |
| 3 | ಕಿರಿಯ ಸಹಾಯಕ | **01** |
| 4 | ದಲಾಯತ್ | **01** |
| | **ಶಾಖೆಯ ಪೂರಕ ಹುದ್ದೆಗಳು** | |
| 5 | ಹಿರಿಯ ಸಹಾಯಕ | **01** |
| 6 | ಕಿರಿಯ ಸಹಾಯಕ | **01** |
| 7 | ಬೆರಳಚ್ಚುಗಾರ/ ಡಾಟಾ ಎಂಟ್ರಿ ಆಪರೇಟರ್ | **01** |
| 8 | ದಲಾಯತ್ | **01** |

ಇದಕ್ಕೆ ತಗಲುವ ವೆಚ್ಚವನ್ನು ಆಯವ್ಯಯದ ಲೆಕ್ಕ ಶೀರ್ಷಿಕೆ 2052-00-090-0-01 (ಯೋಜನೇತರ)ಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 556 ವೆಚ್ಚ-12/2013, ದಿನಾಂಕ: 24.06.2013ರ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

Chandr

(ಚಂದ್ರಶೇಖರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವೆಗಳು-6)

9/7/13

ಇವರಿಗೆ:

*ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.-ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು.*